ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 9–11–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಮೈಸೂರು ಹುಲಿ ಹಜ್ರತ್ ಟಿಪ್ಪುಸುಲ್ತಾನರ ಜಯಂತಿ:<br><br>ಉದ್ಘಾಟನೆ:<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ.<br><br>ಅಧ್ಯಕ್ಷತೆ:<br><br>ಆರ್. ರೋಷನ್ ಬೇಗ್,<br><br>ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಸಚಿವರು.<br><br>ಪ್ರಾಸ್ತಾವಿಕ ನುಡಿ:<br><br>ಡಾ. ಖಮರುಲ್ ಇಸ್ಲಾಂ,<br><br>ಅಲ್ಪಸಂಖ್ಯಾತರ ಕಲ್ಯಾಣ, ವಕ್ಫ್, ಸಾರ್ವಜನಿಕ ಉದ್ದಿಮೆ ಹಾಗೂ ಪೌರಾಡಳಿತ ಇಲಾಖೆ | 10–11–2015<br><br>ಮಂಗಳವಾರ<br><br>ಬೆಳಿಗ್ಗೆ<br>11–00 ಗಂಟೆಗೆ | ಬ್ಯಾಂಕ್ವೆಟ್ ಹಾಲ್<br><br>ವಿಧಾನಸೌಧ,<br><br>ಬೆಂಗಳೂರು |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

## ಚಲನಚಿತ್ರ ನಟ ದೊಡ್ಡಣ್ಣ ಅವರೊಂದಿಗೆ ಬೆಳ್ಳಿಹೆಜ್ಜೆ

**ಬೆಂಗಳೂರು, ನವೆಂಬರ್ 9 (ಕರ್ನಾಟಕ ವಾರ್ತೆ)**

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಕನ್ನಡ ಚಿತ್ರರಂಗದ ಹಿರಿಯ ನಟ ದೊಡ್ಡಣ್ಣ ಅವರೊಂದಿಗೆ ನವೆಂಬರ್ 14 ರಂದು ಸಂಜೆ 5-00 ಗಂಟೆಗೆ ಬೆಂಗಳೂರು ಕುಮಾರಪಾರ್ಕ್ ರಸ್ತೆಯ ಮಹದೇವ ದೇಸಾಯಿ ಸಭಾಂಗಣದಲ್ಲಿ "ಬೆಳ್ಳಿಹೆಜ್ಜೆ" ಕಾರ್ಯಕ್ರಮವನ್ನು ಏರ್ಪಡಿಸಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಸಮಾರಂಭದ ಮುಖ್ಯ ಅತಿಥಿಗಳಾಗಿ ಕನ್ನಡ ಚಲನಚಿತ್ರ ನಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ, ಹಿರಿಯ ಕಲಾವಿದ, ನಿರ್ದೇಶಕ ಹಾಗೂ ನಿರ್ಮಾಪಕ ವಿ. ರವಿಚಂದ್ರನ್, ಹಿರಿಯ ಸಂಗೀತ ನಿರ್ದೇಶಕ ಹಂಸಲೇಖ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು, ಹಿರಿಯ ಚಲನಚಿತ್ರ ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್, ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

## ಪತ್ರಿಕೋದ್ಯಮ ವೃತ್ತಿ ಕೌಶಲ್ಯ ತರಬೇತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು, ನವೆಂಬರ್ 9 (ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2015-16ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ವೃತ್ತಿಯಲ್ಲಿ ತೊಡಗಿಕೊಳ್ಳಲು ಅನುಕೂಲವಾಗುವಂತೆ ವೃತ್ತಿ ಕೌಶಲ್ಯ ತರಬೇತಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ, ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಪದವಿ/ಸ್ನಾತಕ ಪದವಿ/ ಪಿ.ಜಿ ಡಿಪ್ಲೊಮಾ ಪಡೆದಿರುವ, ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅಭ್ಯರ್ಥಿಯು ಪ್ರಸ್ತುತ ಸಾಲಿನಲ್ಲಿ ಇದೇ ಸ್ವರೂಪದ ತರಬೇತಿಯನ್ನು ಸರ್ಕಾರದ ಯಾವುದೇ ಇಲಾಖೆಯಿಂದ ಪಡೆದಿರಬಾರದು.

ಅರ್ಜಿಯ ನಿಗದಿತ ನಮೂನೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕೃತ ವೆಬ್‌ಸೈಟ್ www.karnatakavarthe.org ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ದಿನಾಂಕ 20-11-2015 ರೊಳಗಾಗಿ ಸಲ್ಲಿಸಬೇಕು. ಅಪೂರ್ಣ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಆಯ್ಕೆಯಾದ ಅಭ್ಯರ್ಥಿ ಮೂಲ ದಾಖಲೆಗಳ ಪರಿಶೀಲನೆಗೆ ಗೈರುಹಾಜರಾದಲ್ಲಿ ಮೆರಿಟ್ ಆಧಾರದ ಮೇಲೆ ಮುಂದಿನ ಅಭ್ಯರ್ಥಿಗೆ ಅವಕಾಶ ನೀಡಲಾಗುವುದು.

ಭರ್ತಿ ಮಾಡಿದ ಅರ್ಜಿಗಳನ್ನು ಕಳುಹಿಸಬೇಕಾದ ವಿಳಾಸ 'ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು- 560001' ಹಾಗೂ ಅರ್ಜಿ ಹಾಗೂ ದಾಖಲೆಗಳ ಸಾಫ್ಟ್ (ಸ್ಕ್ಯಾನ್) ಕಾಪಿಯನ್ನು scpinformationdepartment@gmail.com ಗೆ ಇ-ಮೇಲ್ ಮಾಡಲು ಕೋರಿದೆ. ಲಕೋಟೆಯ ಮೇಲೆ ಪತ್ರಿಕೋದ್ಯಮ ವೃತ್ತಿ ಕೌಶಲ್ಯ ತರಬೇತಿಗಾಗಿ ಅರ್ಜಿ ಎಂದು ಬರೆದಿರಬೇಕು.

ಪಲ್ಲವಿ

## ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರ ರಚನೆ

ಬೆಂಗಳೂರು, ನವೆಂಬರ್ 9 (ಕರ್ನಾಟಕ ವಾರ್ತೆ)

ಕರ್ನಾಟಕ ಪೊಲೀಸ್ ಕಾಯ್ದೆ, 1963 ಮತ್ತು ತಿದ್ದುಪಡಿ ಕಾಯ್ದೆ, 2012ರ ಕಲಂ 20-ಡಿ ಅಡಿ ಸರ್ಕಾರವು ವಿಭಾಗ ಮಟ್ಟದಲ್ಲಿ ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ಪ್ರತಿ ಜಿಲ್ಲೆಗೆ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರವನ್ನು ರಚಿಸಿದೆ. ಈ ಪ್ರಾಧಿಕಾರಕ್ಕೆ ಜಿಲ್ಲಾ ಪೊಲೀಸ್ ಅಧೀಕ್ಷಕರು ಮತ್ತು ಬೆಂಗಳೂರು ನಗರ ವ್ಯಾಪ್ತಿಗೆ ಸಂಬಂಧಿಸಿದಂತೆ ಅಪರ ಪೊಲೀಸ್ ಆಯುಕ್ತರು (ಆಡಳಿತ) ಇವರನ್ನು ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಕ ಮಾಡಿದೆ. ಸಾರ್ವಜನಿಕರು ಪೊಲೀಸ್ ಅಧಿಕಾರಿಗಳಾದ ಉಪ ಪೊಲೀಸ್ ಅಧೀಕ್ಷಕರು ಮತ್ತು ಅವರ ಕೆಳಗಿನ ಹಂತದ ಅಧಿಕಾರಿಗಳು ಮತ್ತು ನೌಕರರ ವಿರುದ್ಧ ದೂರು ಹಾಗೂ ಅಹವಾಲು ಇದ್ದಲ್ಲಿ ಈ ಕೆಳಕಂಡ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳ ಕಛೇರಿಗಳಿಗೆ ತಮ್ಮ ದೂರು ಅರ್ಜಿ ಸಲ್ಲಿಸಿ ಪರಿಹಾರ ಕಂಡುಕೊಳ್ಳಬಹುದು ಎಂದು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ತಿಳಿಸಿದ್ದಾರೆ.

| ಕ್ರ. ಸಂ. | ಜಿಲ್ಲೆ | ಸದಸ್ಯ ಕಾರ್ಯದರ್ಶಿಗಳು |
|---|---|---|
| 1. | ಬೆಂಗಳೂರು ನಗರ ಜಿಲ್ಲೆ | ಅಪರ ಪೊಲೀಸ್ ಆಯುಕ್ತರು (ಆಡಳಿತ),<br>ಪೊಲೀಸ್ ಆಯುಕ್ತರ ಕಛೇರಿ, ಬೆಂಗಳೂರು ನಗರ,<br>ಇನ್ಫೆಂಟ್ರಿ ರಸ್ತೆ, ಬೆಂಗಳೂರು<br>ದೂರವಾಣಿ: 080-22943359 |

| | | |
|---|---|---|
| 2. | ಬೆಂಗಳೂರು ಗ್ರಾಮಾಂತರ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೆಂಗಳೂರು ಜಿಲ್ಲೆ, ನಂ.5, ಮಿಲ್ಲರ್ಸ್ ರಸ್ತೆ, ಬೆಂಗಳೂರು. ದೂರವಾಣಿ: 080-22264350 |
| 3. | ರಾಮನಗರ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ರಾಮನಗರ ಜಿಲ್ಲೆ, ಪೊಲೀಸ್ ಭವನ, 2ನೇ ಮಹಡಿ, ರಾಮನಗರ-59. ದೂರವಾಣಿ: 080-27273700 |
| 4. | ಕೋಲಾರ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ಕೋಲಾರ ಜಿಲ್ಲೆ, ಎಂ.ಬಿ.ರಸ್ತೆ, ಕೋಲಾರ. ದೂರವಾಣಿ: 08152-243060 |
| 5. | ಚಿಕ್ಕಬಳ್ಳಾಪುರ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ಚಿಕ್ಕಬಳ್ಳಾಪುರ ಜಿಲ್ಲೆ ದೂರವಾಣಿ: 08156-262000 |
| 6. | ತುಮಕೂರು ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ತುಮಕೂರು ಜಿಲ್ಲೆ, ಬಿ.ಹೆಚ್.ರಸ್ತೆ, ತುಮಕೂರು. ದೂರವಾಣಿ: 08162-272451 |
| 7. | ಚಿತ್ರದುರ್ಗ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ, ತುರುವನೂರು ರಸ್ತೆ, ಚಿತ್ರದುರ್ಗ-577502. ದೂರವಾಣಿ: 08194-222781 |
| 8. | ದಾವಣಗೆರೆ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ದಾವಣಗೆರೆ ಜಿಲ್ಲೆ, ದಾವಣಗೆರೆ. ದೂರವಾಣಿ: 08192-253400 |
| 9. | ಶಿವಮೊಗ್ಗ ಜಿಲ್ಲೆ. | ಜಿಲ್ಲಾ ಪೊಲೀಸ್ ಅಧೀಕ್ಷಕರು, ಶಿವಮೊಗ್ಗ ಜಿಲ್ಲೆ, ಸಾಗರ ರಸ್ತೆ, ಶಿವಮೊಗ್ಗ -577201. ದೂರವಾಣಿ: 08182-261400 |

* ಈ ಮೇಲ್ಕಂಡ ಎಲ್ಲಾ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಗಳಿಗೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರು ಅಧ್ಯಕ್ಷರಾಗಿದ್ದು, ಪ್ರಾದೇಶಿಕ ಆಯುಕ್ತರ ಕಛೇರಿಯ ವಿಳಾಸ: 2ನೇ ಮಹಡಿ, ಬಿಎಂಟಿಸಿ ಕಟ್ಟಡ, ಶಾಂತಿನಗರ, ಬೆಂಗಳೂರು-27, ದೂರವಾಣಿ: 080-22109680

ಪಲ್ಲವಿ/ಕೆಎಂ

# ವಾಹನ ಚಾಲಕರ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು, ನವೆಂಬರ್ 9 (ಕರ್ನಾಟಕ ವಾರ್ತೆ)**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ (ಹೈದರಾಬಾದ್-ಕರ್ನಾಟಕ ಪ್ರದೇಶದ ಹುದ್ದೆಗಳನ್ನು ಒಳಗೊಂಡಂತೆ) **ವಾಹನ ಚಾಲಕರು-436 ಹುದ್ದೆಗಳಿಗೆ** ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

**ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ಇತರೆ ಅರ್ಹತೆಗಳು**

ಎಸ್.ಎಸ್.ಎಲ್.ಸಿ/ತತ್ಸಮಾನ ವಿದ್ಯಾರ್ಹತೆಯಲ್ಲಿ ತೇರ್ಗಡೆ ಹೊಂದಿರಬೇಕು.

ರಾಜ್ಯ ಸರ್ಕಾರದಿಂದ ನೀಡಿದ ಚಾಲ್ತಿಯಲ್ಲಿರುವ ಲಘು ವಾಹನ ಚಾಲನಾ ಪರವಾನಗಿಯೊಂದಿಗೆ ಪ್ಯಾಸೆಂಜರ್ ವಾಹನ ಚಾಲನಾ ಬ್ಯಾಡ್ಜ್ (PSV Badge) ಹೊಂದಿರಬೇಕು._ರಾಜ್ಯ ಸರ್ಕಾರ ಅಥವಾ ಸರ್ಕಾರದಿಂದ ಮಾನ್ಯತೆ ಹೊಂದಿದ ಸಂಸ್ಥೆಗಳಲ್ಲಿ ವಾಹನ ಚಾಲನೆಯಲ್ಲಿ ಕನಿಷ್ಠ ಎರಡು ವರ್ಷ ಅನುಭವ ಹೊಂದಿರಬೇಕು.

ಅರ್ಜಿಗಳನ್ನು ಆನ್–ಲೈನ್ ಮೂಲಕ ದಿನಾಂಕ 16.11.2015ರಿಂದ 15.12.2015ರವರೆಗೆ ಸಲ್ಲಿಸಬಹುದು. ಮೇಲ್ಕಂಡ ಹುದ್ದೆಗಳಿಗೆ ವಿದ್ಯಾರ್ಹತೆ, ಆಯ್ಕೆ ವಿಧಾನ, ವಯೋಮಿತಿ, ಮೀಸಲಾತಿ, ವರ್ಗೀಕರಣ, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ವಿಧಾನ, ಶುಲ್ಕ ಪಾವತಿಸುವ ವಿಧಾನ ಇತ್ಯಾದಿ ವಿವರಗಳನ್ನು www.karhfw.gov.in/drc.aspx ನಲ್ಲಿ ಪ್ರಕಟಿಸಿರುವ ಅಧಿಸೂಚನೆಯಲ್ಲಿ ನೋಡಬಹುದಾಗಿದೆ.

ಪಲ್ಲವಿ/ಕೆಎಂ